ಇ) ಬಾಲ ಕಾರ್ಮಿಕ ಪದ್ದತಿ ನಿರ್ಮೂಲನೆಗಾಗಿ ರಾಜ್ಯ ಸರ್ಕಾರ ಬಾಲ ಕಾರ್ಮಿಕ ನಿರ್ಮೂಲನಾ ಕ್ರಿಯಾ ಯೋಜನೆಯೊಂದನ್ನು ಸಂಬಂಧಪಟ್ಟ ಇಲಾಖೆಗಳ ಸಹಯೋಗದೊಂದಿಗೆ ಮೇ 2001 ರಲ್ಲಿ ಜಾರಿಗೆ ತಂದಿರುತ್ತದೆ.

1) ಕೇಂದ್ರ ಸರ್ಕಾರದ ಸಹಾಯದಿಂದ 7 ಜಿಲ್ಲೆಗಳಲ್ಲಿ 190 ಬ್ರಿಡ್ಜ್ ಕೋರ್ಸ್ ಶಾಲೆಗಳನ್ನು ಮಂಜೂರು ಮಾಡಿದೆ.

2) ರಾಜ್ಯ ಕ್ರಿಯಾ ಯೋಜನೆಯಡಿಯಲ್ಲಿ 20 ಜಿಲ್ಲೆಗಳಲಲಿ 100 ಶಾಲೆಗಳನ್ನು ಮಂಜೂರು ಮಡಿದೆ.

3) ನೊರಾಡ್ ಹಾಗೂ ಯೂನಿಸಿಫ್ ಸಹಾಯದಿಂದ 18 ವಿಶೇಷ ಶಾಲೆಗಳನ್ನು ಮಾಗಡಿ, ದಾವಣಗೆರೆ ಹಾಗೂ ಗುಲ್ಬರ್ಗಾ ತಾಲ್ಲೂಕುಗಳಲ್ಲಿ ಪ್ರಾರಂಭಿಸಿದೆ.

ಬೆಂಗಳೂರು ತುಮಕೂರು ರಾಷ್ಟ್ರೀಯ ಹೆದ್ದಾರಿ ರಸ್ತೆ ಅಭಿವೃದ್ಧಿ

3287 (3769) : ಶ್ರೀ ಚನ್ನಿಗಪ್ಪ ಸಿ. (ಕೊರಟಗೆರೆ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾರಿಯ ರಸ್ತೆಯ ಅಭಿವೃದ್ಧಿಗೆ ಯಾವ ಯಾವ ಯೋಜನೆಯಡಿಯಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಇದುವರೆವಿಗೂ ವ್ಯಯ ಮಾಡಿರುವ ಅನುದಾನವೆಷ್ಟು;

ಆ) ಯಾವ ಯಾವ ಗುತ್ತಿಗೆದಾರರಿಗೆ ರಸ್ತೆಯ ಅಭಿವೃದ್ಧಿ ಕಾಮಗಾರಿಯನ್ನು ವಹಿಸಿಕೊಡಲಾಗಿದೆ;

ಇ) ಈ ರಸ್ತೆ ಅಭಿವೃದ್ಧಿ ಕಾಮಗಾರಿಯು ಯಾವ ವರ್ಷದಲ್ಲಿ ಸಂಪೂರ್ಣವಾಗಿ ಮುಗಿಯುವುದು;

ಈ) ಕಾಮಗಾರಿ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಕೈಗೊಳ್ಳುವ ಕ್ರಮವೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ)ಆ)ಇ)ಈ) ಈ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಭಾರತ ಸರ್ಕಾರವು ಕೈಗೊಳ್ಳುತ್ತಿದೆ. ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ಬರುವುದಿಲ್ಲ.

ಚಿಂತಾಮಣಿ ತಾಲ್ಲೂಕಿನಲ್ಲಿ ರಸ್ತೆಗಳ ಡಾಂಬರೀಕರಣ

3288 (3751) : ಶ್ರೀ ಚೌಡಾರೆಡ್ಡಿ (ಚಿಂತಾಮಣಿ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಂತಾಮಣಿ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ಚಿಂತಾಮಣಿ-ಚನ್ನಸಂದ್ರ ರಸ್ತೆಯಿಂದ ಕಾವಲುಗಾನ ಹಳ್ಳಿ, ನಾರಾಯಣ ಹಳ್ಳಿ, ವಡ್ಡಹಳ್ಳಿಗೆ ನಬಾರ್ಡ್ ಯೋಜನೆಯಲ್ಲಿ ರಸ್ತೆ ಡಾಂಬರೀಕರಣ ಮಡಲು ಸರ್ಕಾರ ಮಂಜೂರಾತಿ ನೀಡಿದೆಯೇ? ನೀಡಿದ್ದರೆ, ಯಾವ ದಿನಾಂಕದಿಂದ ನೀಡಲಾಗಿದೆ.

ಆ) ಸದರಿ ರಸ್ತೆಯ ಡಾಂಬರೀಕರಣ ಮತ್ತು ಇತರ ರಸ್ತೆ ಅಭಿವೃದ್ಧಿ ಕಾರ್ಯವನ್ನು ಮಾಡಲು ಯಾವ ಗುತ್ತಿಗೆದಾರರಿಗೆ ಕೊಡಲಾಗಿದೆ?

ಇ) ಈ ಗುತ್ತಿಗೆದಾರ ರಸ್ತೆಯನ್ನು ಅಲ್ಲಲ್ಲಿ ಸ್ವಲ್ಪ ಮಟ್ಟಿಗೆ ಅಭಿವೃದ್ಧಿ ಮಾಡಿ ಡಾಂಬರೀಕರಣ ಕೈಗೆತ್ತಿಕೊಳ್ಳದೆ ಬಹಳ ದಿನದಿಂದ ಸ್ವಲ್ಪ ಮಟ್ಟಿಗೆ ಕೆಲಸ ಮಾಡಿ ಈಗ ಕೆಲಸ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?